ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ
ಹುಮನಾಬಾದ.

ಸಿ.ಸಿ ನಂ.4735/2023
ಸಿ.ಡಬ್ಲ್ಯೂ-3 ಪಿ.ಡಬ್ಲ್ಯೂ3

| | | |
|---|---|---|
| ಹೆಸರು | : | ಪೀಟರ ತಂದೆ ದೇವರಾಜ ಮಾಳಗೆನೂರ |
| ವಯಸ್ಸು | : | 21- ವರ್ಷ |
| ಉದ್ಯೋಗ | : | ಕೂಲಿ ಕೆಲಸ |
| ವಾಸ | : | ಹುಮನಾಬಾದ |

ದಿನಾಂಕ: 25-02-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿಯ ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ ರವರಿಂದ:

ನನಗೆ ಚಾಸಾ-1 ಮತ್ತು 2 ರವರ ಹಾಗೂ ಆರೋಪಿತನ ಪರಿಚಯವಿರುತ್ತದೆ. ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇರುತ್ತದೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿ.ಪಿ.-2 ಎಂದು ಗುರುತಿಸಲಾಗಿದ್ದು ಸಾಕ್ಷಿ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಈಗ ನೋಡುತ್ತಿರುವ ಇನ್ನೊಂದು ದಾಖಲೆಯಲ್ಲಿ ನನ್ನ ಸಹಿ ಇರುತ್ತದೆ. ಸದರಿ ಜಪ್ತಿ ಪಂಚನಾಮೆಯನ್ನು ಈಗ ನಿಪಿ-3 ಎಂದು ಸಾಕ್ಷಿ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ಸುಮಾರು 2-3 ವರ್ಷಗಳ ಹಿಂದೆ ಕ್ರಿಶ್ಚಿಯನ ಗಲ್ಲಿಯ ಚರ್ಚ ಹತ್ತಿರ ಪೊಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮದಲ್ಲಿ ಯಾವುದೇ ಪಂಚನಾಮೆಯನ್ನು ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ನಿ.ಪಿ-2 ಮತ್ತು 3 ರಲ್ಲಿ ಬರೆದ ವಿಷಯ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನಾ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷಿ ನುಡಿದಿರುವುದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ, ಆಲಿಸಿ ಅನುಮತಿಯನ್ನು ನೀಡಲಾಯಿತು.)

<u>ಪಾಟೀ ಸವಾಲು : ಮಾನ್ಯ ಸ.ಸ.ಅ.ರವರಿಂದಃ</u>

ದಿ : 25-04-2023 ರಂದು ಮದ್ಯಾಹ್ನ 4.30 ರಿಂದ 05.30 ರವರೆಗೆ ಚಾಸಾ-1 ರವರು ತೋರಿಸಿದ ಗುನ್ನಾ ಸ್ಥಳದಲ್ಲಿ ಪೋಲಿಸರು ನನ್ನ ಹಾಗೂ ಚಾಸಾ-2 ರವರ ಸಮಕ್ಷಮದಲ್ಲಿ ಗುನ್ನಾ ಸ್ಥಳದ ಪಂಚನಾಮೆಯನ್ನು ಮಾಡಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ 22-09-2023 ರಂದು ಮದ್ಯಾಹ್ನ 4-30 ರಿಂದ 5-40 ರವರೆಗೆ ಆರೋಪಿತನು ಹಾಜರುಪಡಿಸಿದ ಒಂದು ಕಬ್ಬಿಣದ ಪಂಚನ್ನು ಪೊಲೀಸರ ನನ್ನ ಹಾಗೂ ರಾಜಶೇಖರ ಇವರ ಸಮಕ್ಷಮದಲ್ಲಿ ಪಂಚನಾಮೆ ಮಾಡಿ ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ನಿ.ಪಿ-2 ಮತ್ತು 3 ರಂತೆ ಪಂಚನಾಮೆಯನ್ನು ಮಾಡಿದರೂ ಸಹ ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು: ಶ್ರೀ. ಆರ್.ಜಿ.ಎನ್. ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.</u>

ಮರು ವಿಚಾರಣೆ: ಇಲ್ಲ.

(ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೆ.ಕೆ. ಸರಿ ಇದೆ.

ಪ್ರಧಾನ ಜೆಎಂಎಫ್ ಸಿ ನ್ಯಾಯಾಧೀಶರು
ಹುಮನಾಬಾದ.